# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 1169 |
| ಮಾನ್ಯ ಸದಸ್ಯರ ಹೆಸರು | ಶ್ರೀ ತಿಪ್ಪಣ್ಣಪ್ಪ ಕಮಕನೂರ (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದವರು | ಅಬಕಾರಿ ಸಚಿವರು |
| ಉತ್ತರಿಸಬೇಕಾದ ದಿನಾಂಕ | 21.08.2025 |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಅಬಕಾರಿ ಇಲಾಖೆಯಲ್ಲಿ ಸಿಬ್ಬಂದಿಗಳ ವರ್ಗಾವಣೆ ನೀತಿಯನ್ನು ಪಾರದರ್ಶಕಗೊಳಿಸಲು ಸರ್ಕಾರ ಕೈಗೊಂಡ ಕ್ರಮಗಳೇನು: | ಅಬಕಾರಿ ಇಲಾಖೆಯಲ್ಲಿ ಸಿಬ್ಬಂದಿಗಳ ವರ್ಗಾವಣೆ ನೀತಿಯನ್ನು ಪಾರದರ್ಶಕಗೊಳಿಸಲು ಸರ್ಕಾರವು ಅಧಿಸೂಚನೆ ಸಂಖ್ಯೆ:ಆಇ 10 ಪಿಇಎಸ್ 2024 ದಿನಾಂಕ:14.05.2025ರಲ್ಲಿ ಕರ್ನಾಟಕ ನಾಗರಿಕ ಸೇವೆಗಳು (ಅಬಕಾರಿ ಇಲಾಖೆ ಅಧಿಕಾರಿ ಮತ್ತು ನೌಕರರು ವರ್ಗಾವಣೆ) ನಿಯಮಗಳು 2025ನ್ನು ರಚಿಸಲಾಗಿರುತ್ತದೆ. |
| ಆ) | ರಾಜಕೀಯ ಹಸ್ತಕ್ಷೇಪ ಹಾಗೂ ಒತ್ತಡಕ್ಕೆ ಅವಕಾಶವಿಲ್ಲದಂತೆ ವರ್ಗಾವಣೆಗಳನ್ನು ನಡೆಸಲು ಉದ್ದೇಶಿಸಲಾಗಿದೆಯೇ; | ಅಬಕಾರಿ ಇಲಾಖೆಯಲ್ಲಿ ಗ್ರೂಪ್–ಸಿ ವೃಂದದ ಅಬಕಾರಿ ನಿರೀಕ್ಷಕರು, ಅಬಕಾರಿ ಉಪ ನಿರೀಕ್ಷಕರು, ಅಬಕಾರಿ ಮುಖ್ಯ ಪೇದೆ ಮತ್ತು ಅಬಕಾರಿ ಪೇದೆ ವೃಂದದ ನೌಕರರುಗಳಿಗೆ ಡಿಜಿಟಲ್ ಕೌನ್ಸಿಲಿಂಗ್ ವಿಧಾನದ ಮೂಲಕ ವರ್ಗಾವಣೆ ಮಾಡಲು ನಿಯಮ ಅಳವಡಿಸಿಕೊಳ್ಳಲಾಗಿರುತ್ತದೆ.<br>ಈಗಾಗಲೇ 2025ನೇ ಸಾಲಿನಲ್ಲಿ ಅಬಕಾರಿ ನಿರೀಕ್ಷಕರು ಮತ್ತು ಅಬಕಾರಿ ಉಪ ನಿರೀಕ್ಷಕರ ವೃಂದಗಳಿಗೆ ದಿನಾಂಕ:24.07.2025ರಂದು ಹಾಗೂ ಅಬಕಾರಿ ಮುಖ್ಯ ಪೇದೆ ಮತ್ತು ಅಬಕಾರಿ ಪೇದೆ ವೃಂದಕ್ಕೆ ದಿನಾಂಕ:25.07.2025ರಂದು ವರ್ಗಾವಣೆ ಡಿಜಿಟ್ ಕೌನ್ಸಿಲಿಂಗ್ ವಿಧಾನದ ಮೂಲಕ ನಡೆಸಲಾಗಿದ್ದು, ಅರ್ಹ ನೌಕರರು ಸ್ಥಳ ಆಯ್ಕೆ ಮಾಡಿಕೊಂಡಿರುತ್ತಾರೆ.<br><br>ಅಬಕಾರಿ ಮುಖ್ಯ ಪೇದೆ ಮತ್ತು ಅಬಕಾರಿ ಪೇದೆ ವೃಂದಗಳಿಗೆ ಕೌನ್ಸಿಲಿಂಗ್ ಮೂಲಕ ಸ್ಥಳ ಆಯ್ಕೆ ಮಾಡಿಕೊಂಡ ನೌಕರರುಗಳಿಗೆ ದಿನಾಂಕ:25.07.2025ರಂದು ವರ್ಗಾವಣೆ ಆದೇಶವನ್ನು ಹೊರಡಿಸಲಾಗಿರುತ್ತದೆ.<br><br>ಮಾನ್ಯ ಕರ್ನಾಟಕ ರಾಜ್ಯ ಆಡಳಿತ ನ್ಯಾಯ ಮಂಡಳಿಯ ನಿರ್ದೇಶದನುಸಾರ ಅಬಕಾರಿ ನಿರೀಕ್ಷಕರು ಮತ್ತು ಅಬಕಾರಿ ಉಪ ನಿರೀಕ್ಷಕರ ವೃಂದಗಳಿಗೆ ಕೌನ್ಸಿಲಿಂಗ್ ಮೂಲಕ ಸ್ಥಳ ಆಯ್ಕೆ ಮಾಡಿಕೊಂಡ ನೌಕರರುಗಳಿಗೆ ವರ್ಗಾವಣೆ ಆದೇಶ ಹೊರಡಿಸಿರುವುದಿಲ್ಲ. |

| | | |
|---|---|---|
| -ಇ) | ಈ ಸಂಬಂಧ ಅಗತ್ಯ ಮಾನದಂಡಗಳನ್ನು ರೂಪಸಲಾಗಿದೆಯೇ? | ಸರ್ಕಾರದ ಅಧಿಸೂಚನೆ ಸಂಖ್ಯೆ: ಆಇ 10 ಪಿಇಎಸ್ 2024 ದಿನಾಂಕ:14.05.2025ರ ಅಧಿಸೂಚನೆಯಲ್ಲಿ ಕರ್ನಾಟಕ ನಾಗರಿಕ ಸೇವೆಗಳು (ಅಬಕಾರಿ ಇಲಾಖೆ ಅಧಿಕಾರಿ ಮತ್ತು ನೌಕರರು ವರ್ಗಾವಣೆ) ನಿಯಮಗಳು 2025ರಲ್ಲಿ ಮಾರ್ಗಸೂಚಿಗಳು ಮತ್ತು ನಿರ್ಬಂಧಗಳನ್ನು ಅಧಿಸೂಚಿಸಲಾಗಿರುತ್ತದೆ. ಅದುಅಲ್ಲದೇ ಸರ್ಕಾರದ ಆದೇಶ ಸಂಖ್ಯೆ:ಆಇ 10 ಪಿಇಎಸ್ 2024ರಲ್ಲಿ ಅಗತ್ಯವಿರುವ ಮಾರ್ಗಸೂಚಿಗಳನ್ನು ಹೊರಲಾಗಿರುತ್ತದೆ |

ಆಇ 74 ಇಎಲ್‌ಕ್ಯೂ 2025

(ಆರ್.ಬಿ. ತಿಮ್ಮಾಪುರ)
ಅಬಕಾರಿ ಸಚಿವರು